<u>2 ನೇ ಹೆಚ್ಚುವರಿ ದಿವಾಣಿ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ ಗೋಕಾಕ.</u>

ಸಿ.ಸಿ. ನಂ. 6734/2022
ಸಿಡಬ್ಲ್ಯೂ3 ಪಿಡಬ್ಲ್ಯೂ 2

| | | |
|---|---|---|
| ಸಾಕ್ಷಿಯ ಹೆಸರು | - | ಭೀಮಶಿ ಬಸವಣ್ಣಿ ನಬಾಪೂರಿ |
| ವಯಸ್ಸು | - | 60 ವರ್ಷ |
| ಉದ್ಯೋಗ | - | ಒಕ್ಕಲುತನ |
| ವಾಸ | - | ಅಂಕಲಗಿ |

<u>ದಿನಾಂಕಃ 05-03-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>
<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದಃ</u>

ಸಾಕ್ಷಿಗೆ ಎರಡು ದಾಖಲೆಗಳನ್ನು ತೋರಿಸಿದ್ದು ಅದು ಅಪರಾಧ ಸ್ಥಳದ ಪಂಚನಾಮೆ ಹಾಗೂ ಕಚ್ಚಾ ನಕಾಶೆಯಾಗಿದ್ದು ಅವುಗಳಲ್ಲಿರುವ ಹೆಬ್ಬಟ್ಟಿನ ಗುರುತನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿಪಿ-2 ಮತ್ತು 3 ಎಂದು ಗುರುತಿಸಲಾಗಿದೆ. ಪೊಲೀಸರು ನನ್ನನ್ನು ಅವರ ಜೊತೆ ಕರೆದುಕೊಂಡು ಹೋಗಿರುವುದಿಲ್ಲ, ಯಾವುದೇ ಪಂಚನಾಮೆ ಮಾಡಿರುವುದಿಲ್ಲ, ಚಾಸಾ-2 ರವರ ಪರಿಚಯ ಇರುವುದಿಲ್ಲ, ನಿಪಿ-2 ಮತ್ತು 3 ರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ, ಸಾಕ್ಷಿಗೆ ನಿಪಿ-4 ಭಾವಚಿತ್ರವನ್ನು ತೋರಿಸಿದ್ದು ಅದರಲ್ಲಿ ತಾನು ಇರುವುದನ್ನು ಗುರುತಿಸಿದ್ದು, ನಿಪಿ-4 ನ್ನು ಏಕೆ ತೆಗೆದರು ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೇಳಿದರು, ನೀಡಲಾಯಿತು.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ</u>

ದಿಃ 25-06-2022 ರಂದು ಪೊಲೀಸರು ನನ್ನನ್ನು ಪಂಚರನ್ನಾಗಿ ಅಂಕಲಗಿ ಬಸ್ ನಿಲ್ದಾಣದಲ್ಲಿ ಕರೆಯಿಸಿ ಚಾಸಾ-1 ರವರು ತೋರಿಸಿದ ಅಪರಾಧ ಸ್ಥಳದ ಪಂಚನಾಮೆಯನ್ನು ನನ್ನ ಸಮಕ್ಷಮ 14-00 ಗಂಟೆಯಿಂದ 15-00 ಗಂಟೆಯವರೆಗೆ ಮಾಡಿ ನಿಪಿ-2 ಮತ್ತು 3 ಕ್ಕೆ ನನ್ನ ಹೆಬ್ಬಟ್ಟಿನ ಗುರುತನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈಗ ಆರೋಪಿಯೊಂದಿಗೆ ರಾಜಿ ಆಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಅ.

Sd/-

2ನೇ ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಹಾಗೂ
ನ್ಯಾಯಿಕ ದಂಡಾಧಿಕಾರಿಗಳು, ಗೋಕಾಕ.